ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತಿನ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 20/02/2020

# ಪ್ರಾಣ ಬೆದರಿಕೆ ಹಾಕಿದವರ ವಿರುದ್ಧ ಕ್ರಮ ಕೈಗೊಳ್ಳಿ

**ವಿಧಾನಪರಿಷತ್:** ಶಾಸಕ ಯು.ಟಿ.ಖಾದರ್ ಅವರ ಕೈ-ಕಾಲು ಮುರಿದು ತಲೆ ಕತ್ತರಿಸುತ್ತೇವೆ ಎಂದು ಬೆದರಿಕೆ ಹಾಕಿದ ಆರೋಪಿಗಳ ಮೇಲೆ ಪೊಲೀಸರು ಇಲ್ಲಿವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕಾಂಗ್ರೆಸ್ ಸದಸ್ಯೆ ಜಯಮಾಲಾ ತಿಳಿಸಿದರು. ವಿಧಾನಪರಿಷತ್‌ನಲ್ಲಿ



ಮಾತನಾಡಿ, ಯು.ಟಿ. ಖಾದರ್ ಮೇಲೆ ಅನಗತ್ಯವಾಗಿ ದೇಶದ್ರೋಹದ ಪ್ರಕರಣವನ್ನು ಪೊಲೀಸರು ದಾಖಲಿಸಿದ್ದಾರೆ. ಆದರೆ ಅದೇ ಪೊಲೀಸರು ಖಾದರ್ ಅವರ ತಲೆ ಕತ್ತರಿಸುತ್ತೇವೆ ಎಂದು ಬೆದರಿಕೆ ಹಾಕಿದ್ದವರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ವಿಫಲರಾಗಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು. ಯು.ಟಿ.ಖಾದರ್ ಸಿಎಎ ವಿರುದ್ಧ ಮಾತನಾಡುತ್ತಾ, ಕೇಂದ್ರ ಸರಕಾರ ಸಿಎಎ, ಎನ್‌ಆರ್‌ಸಿ ಮೂಲಕ ಜನರನ್ನು ಅತಂತ್ರರನ್ನಾಗಿ ಮಾಡುತ್ತಿದೆ. ಸರಕಾರ ಹೀಗೆ ಬೆಂಕಿ ಹಚ್ಚು ಕೆಲಸ ಮಾಡಬಾರದು ಎಂದಿದ್ದಕ್ಕೆ, ಅವರ ಮೇಲೆ ದೇಶದ್ರೋಹದ ಪ್ರಕರಣ ದಾಖಲಿಸಲಾಗಿದೆ. ಆದರೆ, ಬಿಜೆಪಿ ಸಂಸದರೊಬ್ಬರು ಬಹಿರಂಗವಾಗಿಯೇ ಬೆಂಕಿ ಹಚ್ಚುತ್ತಿದ್ದಾರೆ ಎಂದು ಹೇಳಿಕೆ ನೀಡಿದ್ದರು. ಅವರ ವಿರುದ್ಧ ಯಾವುದೇ ಕ್ರಮವಿಲ್ಲವೆಂದು ಕಿಡಿಕಾರಿದರು.